ವಿ-72-(48)

## ಶ್ರೀ ಪುಟ್ಟಣ್ಣ, ಮಾನ್ಯ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:** ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಮೊರಾರ್ಜಿ ದೇಸಾಯಿ ಮತ್ತಿತರ ವಿವಿಧ ವಸತಿ ಶಾಲೆಗಳಲ್ಲಿ ಸುದೀರ್ಘ ಸೇವೆ ಸಲ್ಲಿಸುತ್ತಿರುವ ಅತಿಥಿ ಶಿಕ್ಷಕರು ಕರ್ನಾಟಕದ ಮಾನ್ಯ ಉಚ್ಛನ್ಯಾಯಾಲಯದಲ್ಲಿ ಸಲ್ಲಿಸಿದ್ದ ಡಬ್ಲ್ಯೂಪಿ-52876/2018-1412-1546/2019 ಆರ್.ಇ. ಡಬ್ಲ್ಯೂಪಿ-12562-12564, ಡಬ್ಲ್ಯೂಪಿ-46240-45716/2018 ದಾವೆಗಳಲ್ಲಿ ಸದರಿ ಶಿಕ್ಷಕರನ್ನು ಖಾಯಂ ಮಾಡುವಂತೆ ಆದೇಶವಾಗಿದ್ದರು ಸಹ ಇದುವರೆಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಈ ಬಗ್ಗೆ ಹಿಂದೆ ಸರ್ಕಾರವು ಸದನದಲ್ಲಿಯು ಸಹ ಸಚಿವರು ಕೋರ್ಟ್ ಆದೇಶದಂತೆ ಶಿಕ್ಷಕರನ್ನು ಖಾಯಂಗೊಳಿಸುವುದಾಗಿ ಭರವಸೆ ನೀಡಿರುತ್ತಾರೆ. ಆದರೆ ಇತ್ತೀಚಿಗೆ ಸದರಿ ಶಿಕ್ಷಕರುನ್ನು ಏಕಾಏಕಿ ಸೇವೆಯಿಂದ ಬಿಡುಗಡೆಗೊಳಿಸಿ ತೊಂದರೆ ನೀಡಲಾಗುತ್ತಿದೆ. ಸದರಿ ಶಿಕ್ಷಕರಿಗೆ ತೊಂದರೆ ನೀಡುತ್ತಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಂಡು ಕೋರ್ಟ್ ಆದೇಶದಂತೆ ಸದರಿ ಶಾಲೆಗಳ ಅತಿಥಿ ಶಿಕ್ಷಕರನ್ನು ಸೇವೆಯಲ್ಲಿ ಖಾಯಂಗೊಳಿಸಬೇಕೆಂಬ ವಿಷಯವನ್ನು ಸದನದಲ್ಲಿ ನಿಯಮ 330 ರಲ್ಲಿ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

****

**ಉತ್ತರ:-** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ 826 (ಪರಿಶಿಷ್ಟ ಜಾತಿ 503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-167). ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ವಸತಿ ಶಾಲೆ/ಕಾಲೇಜುಗಳಲ್ಲಿ ಒಟ್ಟು 2,213 ಅತಿಥಿ ಶಿಕ್ಷಕರು/ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ.

ಜಿಲ್ಲಾ ಮಟ್ಟದ ಅಧಿಕಾರಿಗಳ ಮೂಲಕ ಅತಿಥಿ ಶಿಕ್ಷಕರು/ ಉಪನ್ಯಾಸಕರ ಹುದ್ದೆಗಳಿಗೆ ಪ್ರತಿ ವರ್ಷ ಅರ್ಜಿ ಆಹ್ವಾನಿಸಿ, ಅಭ್ಯರ್ಥಿಯ ವಿದ್ಯಾರ್ಹತೆ, ಅನುಭವ, ಬೋಧನಾ ಸಾಮರ್ಥ್ಯ ಮತ್ತು ವಿಧಾನ, ಸಂದರ್ಶನ ಮತ್ತಿತರ ಮಾನದಂಡಗಳ ಆಧಾರದ ಮೇಲೆ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಖಾಯಂ ಶಿಕ್ಷಕರನ್ನು ಭರ್ತಿ ಮಾಡುವವರೆಗೆ ಅರ್ಹ ಅತಿಥಿ ಶಿಕ್ಷಕರನ್ನು ಜಿಲ್ಲಾ ಹಂತದಲ್ಲಿ ಆಯ್ಕೆ ಮಾಡಿಕೊಳ್ಳಲಾಗುತ್ತಿದೆ.

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿಗೆ ಕ್ರಮವಹಿಸಿ, ಆಯೋಗವು ಅಂತಿಮ ಆಯ್ಕೆಪಟ್ಟಿ ಪ್ರಕಟಿಸಿದ ಅಭ್ಯರ್ಥಿಗಳಿಗೆ ನಿಯಮಾನುಸಾರ ಸಂಘದ ಅಡಿಯಲ್ಲಿನ ವಸತಿ ಶಾಲೆ/ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳಿಗೆ ಕೌನ್ಸಿಲಿಂಗ್ ಮುಖಾಂತರ ನೇಮಕಾತಿ ಆದೇಶ ನೀಡಲಾಗಿರುತ್ತದೆ. ಈ ರೀತಿ ಕೌನ್ಸಿಲಿಂಗ್ ಮುಖಾಂತರ

ಆದೇಶ ಪಡೆದ ಶಿಕ್ಷಕರು ಆಯ್ಕೆಮಾಡಿಕೊಂಡ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಶಿಕ್ಷಕರನ್ನು ನಿಯಮಾನುಸಾರ ಬಿಡುಗಡೆ ಮಾಡಲಾಗಿರುತ್ತದೆ.

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು WP No: 52876/2018 & 1412-1546/2019, WP No: 12562-12564/2018, WP No 46240/2018, WP No 45714-45716/2018, ರ ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅಂತಿಮ ಆದೇಶವನ್ನು ನೀಡಿರುತ್ತದೆ.

" the third respondent is directed to consider the representation of the petitioners strictly in accordance with law. The writ petitions stand disposed off accordingly. The interim order granted earlier shall stand dissolved". ಎಂದು ಆದೇಶಿಸಲಾಗಿರುತ್ತದೆ.

ಮಾನ್ಯ ನ್ಯಾಯಾಲಯದ ಆದೇಶದಂತೆ ಅತಿಥಿ ಶಿಕ್ಷಕರ ಮನವಿಗಳನ್ನು ಪರಿಶೀಲಿಸಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ ಎಂದು ಹಿಂಬರಹವನ್ನು ನೀಡಲಾಗಿರುತ್ತದೆ.

ಆದ್ದರಿಂದ ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ.

**ಕಡತ ಸಂಖ್ಯೆ: ಸಕಇ 562 ಮೊದೇಶಾ 2021**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು